# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 57 ಗ್ರಾಪಂಸಿ 2019

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿಗಳ ಕಟ್ಟಡ,
ಬೆಂಗಳೂರು, ದಿನಾಂಕ:17-08-2019.

**ಇವರಿಂದ:**

ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು (ಪಂ.ರಾಜ್)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬಹುಮಹಡಿ ಕಟ್ಟಡ,
**ಬೆಂಗಳೂರು.**

**ಇವರಿಗೆ:**

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತ್‌ಗಳು.

ಮಾನ್ಯರೆ,

**ವಿಷಯ:** ಗ್ರಾಮ ಪಂಚಾಯತಿ ಸಿಬ್ಬಂದಿಗಳಿಗೆ ವೇತನಕ್ಕಾಗಿ ಕೊರತೆಯಾಗುವ ಅನುದಾನವನ್ನು 14ನೇ ಹಣಕಾಸು ಆಯೋಗದ ಅನುದಾನದ ಆಡಳಿತ ವೆಚ್ಚದಿಂದ ಭರಿಸುವ ಬಗ್ಗೆ.

ಉಲ್ಲೇಖ: ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಪತ್ರ ಸಂಖ್ಯೆ: ಜಿ-39011/2015-ಎಫ್‌ಡಿ, ದಿನಾಂಕ:16-12-2015.

***

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ:31-10-2017 ರಲ್ಲಿದ್ದಂತೆ ಪ್ರಸ್ತುತ ರಾಜ್ಯದ ಗ್ರಾಮ ಪಂಚಾಯತಿಗಳ ಸಿಬ್ಬಂದಿ ವರ್ಗದ ಮಾದರಿಯಲ್ಲಿ 1) ಬಿಲ್‌ಕಲೆಕ್ಟರ್, 2)ಕ್ಲರ್ಕ್, ಕ್ಲರ್ಕ್ ಕಂ ಡಾಟಾ ಎಂಟ್ರಿ ಆಪರೇಟರ್, 3) ವಾಟರ್‌ಮೆನ್/ ಪಂಪ್ ಆಪರೇಟರ್ / ಪಂಪ್ ಮೆಕಾನಿಕ್ 4) ಜವಾನ ಮತ್ತು 5) ಸ್ವಚ್ಛತಾಗಾರ ವೃಂದದಲ್ಲಿ ಕರ್ತವ್ಯ ನಿರ್ವಹಿಸುತ್ತಿದ್ದು, ಪಂಚತಂತ್ರ ತಂತ್ರಾಂಶದಲ್ಲಿ ಪರಿಶೀಲನೆ ಮಾಡಿರುವ ನೌಕರರಿಗೆ ಮಾರ್ಚ್ 2018 ರಿಂದ ಸರ್ಕಾರದ ನಿಧಿಯಿಂದ ವೇತನ ಪಾವತಿಸಲು ಗ್ರಾಮ ಪಂಚಾಯತಿಗಳಿಗೆ ಅನುದಾನ ಬಿಡುಗಡೆ ಮಾಡಲಾಗುತ್ತಿದೆ. ಉಲ್ಲೇಖಿತ ಭಾರತ ಸರ್ಕಾರದ ಪಂಚಾಯತ್ ರಾಜ್ ಮಂತ್ರಾಲಯದ ಪತ್ರದಲ್ಲಿ 14ನೇ ಹಣಕಾಸು ಆಯೋಗದ ಅನುದಾನದಲ್ಲಿ ಶೇ 10 ರಷ್ಟನ್ನು ಆಡಳಿತ ವೆಚ್ಚಕ್ಕಾಗಿ ಉಪಯೋಗಿಸಿಕೊಳ್ಳಲು ಮಾರ್ಗಸೂಚಿಗಳನ್ನು ಹೊರಡಿಸಲಾಗಿದೆ.

ಕೆಲವು ಗ್ರಾಮ ಪಂಚಾಯತಿಗಳಿಗೆ ನೌಕರರ ವೇತನಕ್ಕಾಗಿ ಸರ್ಕಾರದಿಂದ ಬಿಡುಗಡೆಯಾಗುವ ಅನುದಾನವು ಕೊರತೆಯಾಗುವುದರಿಂದ 14 ನೇ ಹಣಕಾಸು ಯೋಜನೆಯಡಿ ಶೇ. 10 ರಷ್ಟನ್ನು ಆಡಳಿತ ವೆಚ್ಚಕ್ಕಾಗಿ ಉಪಯೋಗಿಸಿಕೊಳ್ಳಬಹುದಾಗಿದ್ದು, ನೌಕರರಿಗೆ ವೇತನ ಪಾವತಿಸಲು ಕೊರತೆಯಾಗುವ ಅನುದಾನವನ್ನು ಮಾತ್ರ 14ನೇ ಹಣಕಾಸು ಯೋಜನೆಯ ಶೇ. 10 ರ ಮಿತಿಯೊಳಗೆ ಭರಿಸಿಕೊಳ್ಳುವಂತೆ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲು ಸರ್ಕಾರವು ತೀರ್ಮಾನಿಸಿದೆ.

ಆದುದರಿಂದ ಗ್ರಾಮ ಪಂಚಾಯತಿ ನೌಕರರಿಗೆ ವೇತನ ಪಾವತಿಸಲು ಕೊರತೆಯಾಗುವ ಅನುದಾನವನ್ನು ಮಾತ್ರ 14ನೇ ಹಣಕಾಸು ಯೋಜನೆಯ ಶೇ. 10 ರ ಮಿತಿಯೊಳಗೆ ಭರಿಸಿಕೊಳ್ಳುವಂತೆ ಗ್ರಾಮ ಪಂಚಾಯತಿಗಳಿಗೆ ನಿರ್ದೇಶನ ನೀಡಲು ಕ್ರಮವಹಿಸುವಂತೆ ತಿಳಿಸಿದೆ.

ಮುಂದುವರೆದು, ಗ್ರಾಮ ಪಂಚಾಯತಿಗಳಿಗೆ ಸಿಬ್ಬಂದಿ ವರ್ಗದ ಮಾದರಿಯಲ್ಲಿ ಮಂಜೂರಾಗದಿರುವ ಡಾಟಾ ಎಂಟ್ರಿ ಆಪರೇಟರ್, ಎಲೆಕ್ಟ್ರೀಷಿಯನ್, ವಾಹನ ಚಾಲಕ ಇತ್ಯಾದಿ ಹುದ್ದೆಗಳಲ್ಲಿ ನೇಮಕಗೊಂಡು ಕರ್ತವ್ಯ ನಿರ್ವಹಿಸುತ್ತಿರುವ ನೌಕರರುಗಳಿಗೆ ಗ್ರಾಮ ಪಂಚಾಯತಿಗಳು ತನ್ನ ಸ್ವಂತ ಸಂಪನ್ಮೂಲದಲ್ಲಿ ಕಾರ್ಮಿಕ ಇಲಾಖೆ ನಿಗದಿಪಡಿಸಿರುವ ವೇತನ ಕಡ್ಡಾಯವಾಗಿ ಪಾವತಿಸಲು ಕ್ರಮ ವಹಿಸುವಂತೆ ತಮಗೆ ತಿಳಿಸಲು ನಾನು ನಿರ್ದೇಶಿಸಲ್ಪಟ್ಟಿದ್ದೇನೆ.

ತಮ್ಮ ವಿಶ್ವಾಸಿ,

Narayana D.G.
17/8/15

(ಡಿ.ಜಿ. ನಾರಾಯಣ)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ (ಗ್ರಾ.ಪಂ) (ಪ್ರ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

**ಪ್ರತಿ: ಮಾಹಿತಿ ಮತ್ತು ಅಗತ್ಯ ಕ್ರಮಕ್ಕಾಗಿ.**

1) ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
2) ಎಲ್ಲಾ ಗ್ರಾಮ ಪಂಚಾಯತಿಗಳ ಅಧ್ಯಕ್ಷರು ಮತ್ತು ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳು.
3) ಸಂಪಾದಕರು, ಕರ್ನಾಟಕ ವಿಕಾಸ ಪತ್ರಿಕೆ/ವೆಬ್‌ಸೈಟ್, ಗ್ರಾ.ಅ ಮತ್ತು ಪಂ.ರಾಜ್ ಇಲಾಖೆ.
4) ಶ್ರೀ ಮಾರುತಿ ಮಾನ್ಪಡೆ, ಅಧ್ಯಕ್ಷರು, ಕರ್ನಾಟಕ ರಾಜ್ಯ ಗ್ರಾಮ ಪಂಚಾಯತಿ ನೌಕರರ ಸಂಘ (ಸಿ.ಐ.ಟಿ.ಯು. ಸಂಯೋಜಿತ), ರಾಜ್ಯ ಸಮಿತಿ ನಂ. 40/6, ಎನ್.ಕೆ. ಉಪಾಧ್ಯಾಯ ಭವನ, 2ನೇ ಬಿ ಮೈನ್, 16ನೇ ಕ್ರಾಸ್, ಸಂಪಂಗಿರಾಮನಗರ, ಬೆಂಗಳೂರು-560 027.
5) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿ.